ಪ್ರಜಾ ಭಾರತ

ಕನ್ನಡ ದಿನಪತ್ರಿಕೆ

ಸತ್ಯದ ಪರ - ಪ್ರಜೆಗಳ ಧ್ವನಿ..!



'ಮೋದಿ ವರ್ಚಸ್ಸು ಕಡಿಮೆಯಾಗುತ್ತಿದೆ, 2029ರಲ್ಲಿ ಯಾವುದೇ ಕಾರಣಕ್ಕೂ ಬಿಜೆಪಿ ಅಧಿಕಾರಕ್ಕೆ ಬರಲ್ಲ;

ಸಂಪಾದಕ: ದಿನೇಶ್ ಬೆಳ್ಳಾವರ, ಮೊ: 94821 01707 Email. prajabharathanews@gmail.com ಸಹ ಸಂಪಾದಕ : ಬಿ.ಬಿ ಶಿವರಾಜು, ಮೊ: 98809 08468

Volume-01 Issue-66 HASSAN Date : 07.11.2026 SATURDAY Reg No.PRGI No. KNKAN/26/A6168 Page-02 Rs.1.00

ಸಂಪುಟ–01 ಸಂಚಿಕೆ–66 ಹಾಸನ ದಿನಾಂಕ: 07.11.2026 ಶನಿವಾರ ರಿ.ನಂ.PRGI No. KNKAN/26/A6168 ಪುಟ:02 ಬೆಲೆ:1.00ರೂ.

ದೇವರ ಗುಡ್ಡವನ್ನೇ ಬಿಡದ ಕಾಫಿ ದಾಹ

ಐತಿಹಾಸಿಕ ಕಿತ್ತಾವರ ಬೆಟ್ಟದ ಒಡಲು ಅಗೆದು ಕಾಫಿ ನಾಟಿ । ಪ್ರಕೃತಿಯ ಎದೆಗೆ ಕೊಡಲಿ ಪೆಟ್ಟು

ಪ್ರಜಾ ವಿಶೇಷ



ಹಾಸನ ಧಾರ್ಮಿಕ ಪರಂಪರೆ, ಐತಿಹಾಸಿಕ ಕುರುಹುಗಳು ಹಾಗೂ ಹಸಿರಿನ ಪ್ರಕೃತಿ ಸೌಂದರ್ಯದಿಂದ ಗುರುತಿಸಿಕೊಂಡಿರುವ ಕಿತ್ತಾವರ ಗುಡ್ಡ ಇದೀಗ ಕಾಫಿ ಕೃಷಿಯ ಹೆಸರಿನಲ್ಲಿ ತನ್ನ ಅಸ್ತಿತ್ವವನ್ನೇ ಕಳೆದುಕೊಳ್ಳುವ ಆತಂಕ ಎದುರಿಸುತ್ತಿದೆ. ನೂರಾರು ವರ್ಷಗಳ ಇತಿಹಾಸ ಹೊಂದಿದೆ ಎನ್ನಲಾದ ಪುರಾತನ ದೇಗುಲಗಳು, ಭಕ್ತರ ಧಾರ್ಮಿಕ ನಂಬಿಕೆ ಹಾಗೂ ಅಪಾರ ಜೀವವೈವಿಧ್ಯಕ್ಕೆ ಆಶ್ರಯವಾಗಿರುವ ಈ ಗುಡ್ಡದ ಒಡಲನ್ನೇ ಅಗೆದು, ಮಣ್ಣು ಸಮತಟ್ಟು ಮಾಡಿ ಕಾಫಿ ಗಿಡಗಳನ್ನು ನಾಟಿ ಮಾಡಿರುವ ಆರೋಪ ಸ್ಥಳೀಯರಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಹೌದು ಜಿಲ್ಲೆಯ ಬೇಲೂರು ತಾಲ್ಲೂಕಿನ ಅರೇಹಳ್ಳಿ ಹೋಬಳಿಯ ಅನುಘಟ್ಟ ಹಾಗೂ ಮಲಸಾವರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕಿತ್ತಾವರ ಗುಡ್ಡ ಈಗ ಖಾಸಗಿ ವ್ಯಕ್ತಿಯ ಕೃಷಿ ಚಟುವಟಿಕೆಯಿಂದಾಗಿ ತನ್ನ ನೈಸರ್ಗಿಕ ಸೌಂದರ್ಯ ಕಳೆದುಕೊಳ್ಳುವ ಸ್ಥಿತಿಗೆ ತಲುಪಿದೆ. ಅಭಿವೃದ್ಧಿ ಮತ್ತು ಕೃಷಿಯ ಹೆಸರಿನಲ್ಲಿ ಪ್ರಕೃತಿಯ ಮಡಿಲನ್ನೇ ಅಗೆದುಹಾಕುವ ಈ ಬೆಳವಣಿಗೆಗೆ ಕಡಿವಾಣ ಹಾಕುವವರು ಯಾರು ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

● **ಗುಡ್ಡವನ್ನೇ ಕೊರೆದು ಕಾಫಿ ತೋಟ**

ಕಿತ್ತಾವರ ಗುಡ್ಡದ ಮೇಲ್ಭಾಗದಲ್ಲಿರುವ ಪುರಾತನ ವೀರಭದ್ರೇಶ್ವರ ದೇಗುಲದ ಸಮೀಪದ ದಕ್ಷಿಣ ಹಾಗೂ ಪಶ್ಚಿಮ ದಿಕ್ಕಿನಲ್ಲಿ ದೊಡ್ಡಸಾಲಾವರ ಗ್ರಾಮದ ಖಾಸಗಿ ವ್ಯಕ್ತಿಯೊಬ್ಬರು ಬೆಟ್ಟವನ್ನು ಅಗೆದು ಕಾಫಿ ಕೃಷಿಗೆ ಭೂಮಿ ಸಿದ್ಧಪಡಿಸಿದ್ದಾರೆ ಎನ್ನಲಾಗಿದೆ. ಸುಮಾರು 30 ರಿಂದ 40 ಅಡಿ ಎತ್ತರದವರೆಗೆ ಮಣ್ಣು ಸುರಿದು, ಗುಡ್ಡದ ಭಾಗವನ್ನು ಸಮತಟ್ಟು ಮಾಡಿ ಕಾಫಿ ಗಿಡಗಳನ್ನು ನಾಟಿ ಮಾಡಲಾಗಿದೆ ಎಂಬುದು ಗ್ರಾಮಸ್ಥರ ಆರೋಪ.



ಗುಡ್ಡದ ಸಹಜ ಭೌಗೋಳಿಕ ಸ್ವರೂಪವನ್ನೇ ಬದಲಿಸುವ ರೀತಿಯಲ್ಲಿ ನಡೆಯುತ್ತಿರುವ ಈ ಕಾಮಗಾರಿಯಿಂದ ಅಲ್ಲಿನ ಮರಗಿಡಗಳು, ಪೊದೆಗಳು ಹಾಗೂ ಪ್ರಾಣಿ–ಪಕ್ಷಿಗಳ ಆವಾಸಸ್ಥಾನಕ್ಕೆ ಧಕ್ಕೆಯಾಗಿದೆ ಎಂಬ ಆತಂಕ ವ್ಯಕ್ತವಾಗಿದೆ. ಕೃಷಿ ಮಾಡುವ ಹಕ್ಕಿನ ಹೆಸರಿನಲ್ಲಿ ಪ್ರಕೃತಿಯ ಉಳಿವನ್ನೇ ಬಲಿಕೊಡುವುದು ಎಷ್ಟು ಸಮಂಜಸ ಎಂಬ ಪ್ರಶ್ನೆ ಪರಿಸರಾಸಕ್ತರನ್ನು ಕಾಡುತ್ತಿದೆ.

● **ಪುರಾತನ ದೇಗುಲದ ಅಂಗಳಕ್ಕೂ ಕಂಟಕ**

ಕಿತ್ತಾವರ ಗುಡ್ಡ ಕೇವಲ ಬೆಟ್ಟವಲ್ಲ. ಈ ಭಾಗದ ಜನರ ಧಾರ್ಮಿಕ ಭಾವನೆ, ನಂಬಿಕೆ ಹಾಗೂ ಐತಿಹಾಸಿಕ ಪರಂಪರೆಯ ಪ್ರತೀಕವಾಗಿದೆ. ಗುಡ್ಡದ ತುತ್ತತುದಿಯಲ್ಲಿರುವ ಬಸವಣ್ಣ ದೇವರ ಗುಡಿ ಭಕ್ತರ ಆರಾಧನಾ ಕೇಂದ್ರವಾಗಿದ್ದು, ಪ್ರತಿವರ್ಷ ಕಾರ್ತಿಕ ಮಾಸದಲ್ಲಿ ವಿಜೃಂಭಣೆಯಿಂದ ಮಹೋತ್ಸವ ನಡೆಯುತ್ತದೆ.

ಪುರಾತನ ದೇಗುಲದ ಅಂಗಳದಲ್ಲೇ ಬೆಟ್ಟಕ್ಕೆ ಕತ್ತರಿ । ನಕಾಶೆ ರಸ್ತೆಯೂ ಬಂದ್ । ಜೀವಸಂಕುಲದ ಆವಾಸಕ್ಕೆ ಕುತ್ತು ತಂದ ಕಾಫಿ ತೋಟ

ಇದರ ಸಮೀಪದಲ್ಲೇ ಚೋಳರ ಕಾಲದಲ್ಲಿ ನಿರ್ಮಾಣವಾಗಿದೆ ಎನ್ನಲಾದ ಪುರಾತನ ವೀರಭದ್ರೇಶ್ವರ ದೇವಸ್ಥಾನವಿದೆ. ಈಗಾಗಲೇ ನಿರ್ಲಕ್ಷ್ಯದಿಂದ ಪಾಳುಬಿದ್ದ ಸ್ಥಿತಿಯಲ್ಲಿರುವ ಈ ದೇಗುಲದ ಸುತ್ತಮುತ್ತಲಿನ ಪ್ರದೇಶದಲ್ಲೇ ಬೆಟ್ಟವನ್ನು ಅಗೆದು ಕಾಫಿ ನಾಟಿ ಮಾಡಿರುವುದು ಐತಿಹಾಸಿಕ ಪರಂಪರೆಯ ಉಳಿವಿನ ಬಗ್ಗೆ ಆತಂಕ ಮೂಡಿಸಿದೆ.

ನೂರಾರು ವರ್ಷಗಳ ಇತಿಹಾಸದ ಕುರುಹುಗಳನ್ನು ಹೊಂದಿರುವ ಪ್ರದೇಶದಲ್ಲಿ ಇಂತಹ ಚಟುವಟಿಕೆಗಳು ನಡೆಯುತ್ತಿದ್ದರೂ ಸಂಬಂಧಪಟ್ಟ ಇಲಾಖೆಗಳ ಗಮನಕ್ಕೆ ಬಂದಿದೆಯೇ, ಅನುಮತಿ ಪಡೆದು ಕಾಮಗಾರಿ ನಡೆಸಲಾಗಿದೆಯೇ, ಎಂಬ ಪ್ರಶ್ನೆಗಳಿಗೆ ಅಧಿಕಾರಿಗಳೇ ಉತ್ತರಿಸಬೇಕಿದೆ.

● **ನಕಾಶೆ ರಸ್ತೆಯೇ ಖಾಸಗಿ ಸ್ವತ್ತಾಯಿತೇ**

ಕಿತ್ತಾವರ ಗುಡ್ಡದ ಮತ್ತೊಂದು ಗಂಭೀರ ಸಮಸ್ಯೆ ಎಂದರೆ ಸಾರ್ವಜನಿಕ ಬಳಕೆಯಲ್ಲಿದ್ದ ನಕಾಶೆ ರಸ್ತೆ ಬಂದ್ ಆಗಿರುವುದು. ದೊಡ್ಡಸಾಲಾವರ ಗ್ರಾಮದ ಜನರು ಹಲವು ವರ್ಷಗಳಿಂದ ಪಡಿತರ ಖರೀದಿ, ಜಾನುವಾರುಗಳ ಮೇಯಿಸುವಿಕೆ ಹಾಗೂ ಇತರೆ ದೈನಂದಿನ ಕೆಲಸಗಳಿಗಾಗಿ ಈ ರಸ್ತೆಯ ಮೂಲಕ ಗುಡ್ಡ ದಾಟಿ ಅನುಘಟ್ಟಕ್ಕೆ ತೆರಳುತ್ತಿದ್ದರು. ಆದರೆ ಕಾಫಿ ತೋಟ ನಿರ್ಮಾಣದ ಸಂದರ್ಭದಲ್ಲಿ ನಕಾಶೆ ರಸ್ತೆಯನ್ನೇ ಸಂಪೂರ್ಣವಾಗಿ ಬಂದ್ ಮಾಡಲಾಗಿದೆ ಎಂಬುದು ಗ್ರಾಮಸ್ಥರ ಆರೋಪ. ಇದರಿಂದ ಗ್ರಾಮಸ್ಥರ ಸಂಚಾರಕ್ಕೆ ತೊಂದರೆಯಾಗಿದ್ದು, ಜಾನುವಾರುಗಳನ್ನು ಮೇಯಿಸಲು ತೆರಳಲೂ ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ.

ಸಾರ್ವಜನಿಕ ಬಳಕೆಯಲ್ಲಿದ್ದ ರಸ್ತೆಯ ದಾಖಲೆಗಳು, ಅದರ ವಾಸ್ತವಿಕ ಸ್ಥಿತಿ ಹಾಗೂ ರಸ್ತೆ ಬಂದ್ ಮಾಡಲು ಅನುಮತಿ ಇದೆಯೇ ಎಂಬುದನ್ನು ಕಂದಾಯ ಇಲಾಖೆ ಪರಿಶೀಲಿಸಬೇಕಿದೆ. ನಕಾಶೆ ರಸ್ತೆಯೇ ಇಲ್ಲದಂತಾದರೆ ಗ್ರಾಮಸ್ಥರ ಸಂಚಾರ ಹಕ್ಕಿಗೆ ನ್ಯಾಯ ದೊರಕಿಸುವವರು ಯಾರು ಎಂಬ ಪ್ರಶ್ನೆಯೂ ಎದುರಾಗಿದೆ.

● **ಮೂಕ ಪ್ರಾಣಿ–ಪಕ್ಷಿಗಳ ಬದುಕಿಗೂ ಕುತ್ತು**

ಗುಡ್ಡದ ಮೇಲೆ ಬೆಳೆದಿರುವ ವಿವಿಧ ಜಾತಿಯ ಮರಗಳು, ಪೊದೆಗಳು ಹಾಗೂ ಸಸ್ಯಸಂಪತ್ತು ಅನೇಕ ಪಕ್ಷಿಗಳು, ಕೀಟಗಳು ಮತ್ತು ಸಣ್ಣಪುಟ್ಟ ಪ್ರಾಣಿಗಳಿಗೆ ಆಶ್ರಯ ನೀಡುತ್ತಿವೆ.

ಆದರೆ ಅರಣ್ಯಸಂಪತ್ತನ್ನು ತೆರವುಗೊಳಿಸಿ, ಬೆಟ್ಟವನ್ನು ಅಗೆದು ಕೃಷಿ ಭೂಮಿಯನ್ನಾಗಿ ಪರಿವರ್ತಿಸುವುದರಿಂದ ಜೀವಸಂಕುಲದ ಸಹಜ ಬದುಕಿಗೆ ಧಕ್ಕೆಯಾಗುವ ಸಾಧ್ಯತೆಯಿದೆ.

ಮನುಷ್ಯನ ಕೃಷಿ ಆಸೆಗೆ ಪ್ರಕೃತಿಯ ಒಡಲನ್ನೇ ಬಗೆದರೆ ಅಲ್ಲಿರುವ ಮೂಕ ಜೀವಿಗಳು ಆಶ್ರಯಕ್ಕಾಗಿ ಎಲ್ಲಿಗೆ ಹೋಗಬೇಕು? ಅಭಿವೃದ್ಧಿ ಮತ್ತು ಕೃಷಿ ಚಟುವಟಿಕೆಗಳು ಪರಿಸರದ ಸಮತೋಲನವನ್ನು ಹಾಳುಮಾಡುವ ಮಟ್ಟಕ್ಕೆ ತಲುಪಬಾರದು ಎಂಬುದು ಪರಿಸರಾಸಕ್ತರ ಅಭಿಪ್ರಾಯವಾಗಿದೆ.

● **ಅಧಿಕಾರಿಗಳು ಮೌನವಾಗಿರುವುದೇಕೆ**

ಕಿತ್ತಾವರ ಗುಡ್ಡದ ವಿಚಾರದಲ್ಲಿ ಗ್ರಾಮಸ್ಥರು ಹಲವು ಆತಂಕಗಳನ್ನು ವ್ಯಕ್ತಪಡಿಸುತ್ತಿದ್ದರೂ ಸಂಬಂಧಪಟ್ಟ ಇಲಾಖೆಗಳು ಸ್ಥಳ ಪರಿಶೀಲನೆ ನಡೆಸಿ ವಾಸ್ತವಾಂಶ ಬಹಿರಂಗಪಡಿಸಬೇಕಿದೆ. ಬೆಟ್ಟವನ್ನು ಅಗೆದಿರುವುದಕ್ಕೆ ಅನುಮತಿ ಇದೆಯೇ, ಜಾಗದ ದಾಖಲೆಗಳೇನು, ನಕಾಶೆ ರಸ್ತೆಯ ದಾಖಲೆಗಳಲ್ಲಿ ಅದರ ಅಸ್ತಿತ್ವವಿದೆಯೇ, ಪುರಾತನ ದೇಗುಲದ ಸುತ್ತಲಿನ ಪ್ರದೇಶದ ಸಂರಕ್ಷಣೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ಎಂಬುದರ ಬಗ್ಗೆ ಸಮಗ್ರ ತನಿಖೆಯಾಗಬೇಕಿದೆ.

ಕೃಷಿ ಮಾಡುವುದಕ್ಕೆ ಯಾರ ವಿರೋಧವೂ ಇಲ್ಲ. ಆದರೆ ಕೃಷಿಯ ಹೆಸರಿನಲ್ಲಿ ಸಾರ್ವಜನಿಕ ದಾರಿ, ಧಾರ್ಮಿಕ ನಂಬಿಕೆ, ಐತಿಹಾಸಿಕ ಕುರುಹುಗಳು ಹಾಗೂ ಪರಿಸರಕ್ಕೆ ಧಕ್ಕೆಯಾಗುತ್ತಿದ್ದರೆ ಅದನ್ನು ಪ್ರಶ್ನಿಸುವುದು ನಾಗರಿಕರ ಹಕ್ಕು. ಕಿತ್ತಾವರ ಗುಡ್ಡದ ಉಳಿವಿಗಾಗಿ ಅಧಿಕಾರಿಗಳು ತಕ್ಷಣ ಸ್ಥಳ ಪರಿಶೀಲನೆ ನಡೆಸಿ, ನಿಯಮ ಉಲ್ಲಂಘನೆ ಕಂಡುಬಂದಲ್ಲಿ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕೆಂಬುದು ಸ್ಥಳೀಯರ ಒತ್ತಾಯವಾಗಿದೆ.

ಒಟ್ಟಿನಲ್ಲಿ, ಕಿತ್ತಾವರ ಗುಡ್ಡ ಉಳಿದರೆ ಇತಿಹಾಸ ಉಳಿಯುತ್ತದೆ, ಪ್ರಕೃತಿ ಉಳಿಯುತ್ತದೆ, ಮುಂದಿನ ಪೀಳಿಗೆಗೆ ನಮ್ಮ ಪರಂಪರೆಯ ಪರಿಚಯ ಉಳಿಯುತ್ತದೆ.

ಇಲ್ಲವಾದರೆ ಖಾಸಗಿ ಲಾಭದ ಮುಂದೆ ಸಾರ್ವಜನಿಕ ಪರಂಪರೆ ಮಣ್ಣಾಗುವ ಅಪಾಯವಿದೆ. ಗುಡ್ಡದ ಉಳಿವಿಗಾಗಿ ಗ್ರಾಮಸ್ಥರು, ಪರಿಸರ ಪ್ರೇಮಿಗಳು, ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಪಕ್ಷಾತೀತವಾಗಿ ಒಂದಾಗಬೇಕಿದೆ.

"ಜನರ ಧಾರ್ಮಿಕ ನಂಬಿಕೆಗಳೊಂದಿಗೆ ಬೆಸೆದುಕೊಂಡಿರುವ ಕಿತ್ತಾವರ ಗುಡ್ಡವನ್ನು ಅಗೆದು ಕಾನೂನುಬಾಹಿರವಾಗಿ ಕಾಫಿ ನಾಟಿ ಮಾಡಲಾಗಿದೆ. ನಾಟಿ ಮಾಡ ಲಾದ ಜಾಗವನ್ನು ಸಂಪೂರ್ಣವಾಗಿ ತೆರವುಗೊಳಿಸುವ ಮೂಲಕ ಪರಿಸರ ಹಾಗೂ ಜೀವವೈವಿಧ್ಯತೆಯನ್ನು ಕಾಪಾಡಲು ಅಧಿಕಾರಿಗಳು ತಕ್ಷಣ ಗಮನಹರಿಸಬೇಕು."



–ಡಿ.ಎನ್. ಪ್ರವೀಣ್ ಕುಮಾರ್, ಜೆಡಿಎಸ್ ಮುಖಂಡ, ದೊಡ್ಡಸಾಲಾವರ.

ಹಾಸನಾಂಬೆ ದರ್ಶನಕ್ಕೆ ಭಕ್ತಸಾಗರ: 16.50 ಲಕ್ಷಕ್ಕೂ ಅಧಿಕ ಭಕ್ತರಿಂದ ದರ್ಶನ



ಪ್ರಜಾ ಭಾರತ ವರದಿ

ಹಾಸನ: ಐತಿಹಾಸಿಕ ಹಾಸನಾಂಬೆ ದೇವಿಯ ದರ್ಶನೋತ್ಸವ ಎಂಟನೇ ದಿನಕ್ಕೆ ಕಾಲಿಟ್ಟಿದ್ದು, ದಿನದಿಂದ ದಿನಕ್ಕೆ ಭಕ್ತರ ಸಂಖ್ಯೆ ಹೆಚ್ಚಾಗುತ್ತಿದೆ. ಶುಕ್ರವಾರವೂ ಸಾವಿರಾರು ಭಕ್ತರು ಆಗಮಿಸಿದ್ದರಿಂದ ದೇವಸ್ಥಾನದ ಸುತ್ತಮುತ್ತ ಜನಸಾಗರವೇ ಹರಿದುಬಂದಿತ್ತು.

ಧರ್ಮದರ್ಶನದ ಸರತಿ ಸಾಲಿನಲ್ಲಿ ನಿಂತ ಭಕ್ತರು ದೇವಿಯ ದರ್ಶನಕ್ಕಾಗಿ 9ರಿಂದ 10 ಗಂಟೆಗಳ ಕಾಲ ಕಾಯುವಂತಾಯಿತು. ರೂ.1,000 ಮತ್ತು ರೂ.300 ವಿಶೇಷ ದರ್ಶನದ ಟಿಕೆಟ್ ವ್ಯವಸ್ಥೆಯಿದ್ದರೂ ಭಕ್ತರ ದಟ್ಟಣೆಯಿಂದ ದರ್ಶನ ವಿಳಂಬವಾಗುತ್ತಿದೆ. ಭಕ್ತರಿಗೆ ದರ್ಶನ ಕಲ್ಪಿಸುವ ಉದ್ದೇಶದಿಂದ ಮಧ್ಯಾಹ್ನ 2 ಗಂಟೆಯವರೆಗೂ ದರ್ಶನ ವ್ಯವಸ್ಥೆ ಮುಂದುವರಿಸಲಾಯಿತು.

ಮಳೆ, ವಿದ್ಯುತ್ ವ್ಯತ್ಯಯದಿಂದ ಭಕ್ತರ ಪರದಾಟ

ಗುರುವಾರ ತಡರಾತ್ರಿ ಸುರಿದ ಗುಡುಗು, ಸಿಡಿಲು ಸಹಿತ ಭಾರಿ ಮಳೆಯಿಂದಾಗಿ ಕೆಲಕಾಲ ವಿದ್ಯುತ್ ಸಂಪರ್ಕ ಕಡಿತಗೊಂಡು ಸರತಿ ಸಾಲಿನ ಪ್ರದೇಶ ಕತ್ತಲಿನಿಂದ ಆವೃತವಾಗಿತ್ತು. ಜನರೇಟರ್ ವ್ಯವಸ್ಥೆ ಇಲ್ಲದ ಕಾರಣ ಭಕ್ತರು ಮೊಬೈಲ್ ಟಾರ್ಚ್ ಬೆಳಕಿನಲ್ಲಿ ಕಾಯುವಂತಾಯಿತು. ಶುಕ್ರವಾರವೂ ತುಂತುರು ಮಳೆ ಸುರಿದ ಹಿನ್ನೆಲೆಯಲ್ಲಿ ಭಕ್ತರು ಮಳೆಯಲ್ಲಿಯೇ ದರ್ಶನ ಪಡೆಯಲು ತೆರಳಿದರು.

15 ಕೋಟಿಗೂ ಅಧಿಕ ಆದಾಯ

ಈವರೆಗೆ 16.50 ಲಕ್ಷಕ್ಕೂ ಅಧಿಕ ಭಕ್ತರು ಹಾಸನಾಂಬೆ ದೇವಿಯ ದರ್ಶನ ಪಡೆದಿದ್ದು, ವಿಶೇಷ ದರ್ಶನದ ಟಿಕೆಟ್ ಹಾಗೂ ಲಾಡು ಪ್ರಸಾದ ಮಾರಾಟದಿಂದ ರೂ.15 ಕೋಟಿಗೂ ಅಧಿಕ ಆದಾಯ ಸಂಗ್ರಹವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ತಿಳಿಸಿದ್ದಾರೆ.

ಮುಂದಿನ ದಿನಗಳಲ್ಲಿ ದೀಪಾವಳಿ ಹಾಗೂ ರಜೆ ದಿನಗಳ ಹಿನ್ನೆಲೆಯಲ್ಲಿ ಭಕ್ತರ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ನಿರೀಕ್ಷೆಯಿದೆ. ಪ್ರತಿಯೊಬ್ಬ ಭಕ್ತರಿಗೂ ದರ್ಶನಕ್ಕೆ ಅವಕಾಶ ಕಲ್ಪಿಸಲಾಗುವುದು. ಗಣ್ಯರ ಪ್ರೋಟೋಕಾಲ್ ವ್ಯವಸ್ಥೆಯಿಂದ ಸಾಮಾನ್ಯ ಭಕ್ತರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗಿದ್ದು, ಗಣ್ಯರೊಂದಿಗೆ ಮೂವರು ಅಥವಾ ನಾಲ್ವರು ಮಾತ್ರ ಬರಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಇದೇ ವೇಳೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಮಳೆಯನ್ನೂ ಲೆಕ್ಕಿಸದೆ ದೇವಸ್ಥಾನದ ಆವರಣ ಹಾಗೂ ಭಕ್ತರ ಸರತಿ ಸಾಲಿನಲ್ಲಿ ಸಂಚರಿಸಿ ವ್ಯವಸ್ಥೆ ಪರಿಶೀಲಿಸಿದರು.

ಅಪರಿಚಿತ ವಾಹನ ಡಿಕ್ಕಿ ಬೈಕ್ ಸವಾರ ಸಾವು

ಪ್ರಜಾ ಭಾರತ ವರದಿ

ಸಕಲೇಶಪುರ: ತಾಲೂಕಿನ ಬಿರಡಹಳ್ಳಿ ಸಮೀಪದ ನಾರ್ವೆ ಮುಖ್ಯ ರಸ್ತೆಯ ತಿರುವಿನಲ್ಲಿ ಗುರುವಾರ ತಡರಾತ್ರಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿದ್ದ ಕೆಳಗಲಳೆ ಗ್ರಾಮದ ಯುವಕ ಪ್ರಶಾಂತ್ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.



ಗುರುವಾರ ತಡರಾತ್ರಿ ರಸ್ತೆ ತಿರುವಿನಲ್ಲಿ ವೇಗವಾಗಿ ಬಂದ ಅಪರಿಚಿತ ವಾಹನವೊಂದು ಪ್ರಶಾಂತ್ ಅವರಿಗೆ ಬೈಕ್ಗೆ ಬಲವಾಗಿ ಢಿಕ್ಕಿ ಹೊಡೆದು, ಚಾಲಕ ವಾಹನದೊಂದಿಗೆ ಪರಾರಿಯಾಗಿದ್ದಾನೆ. ಢಿಕ್ಕಿಯ ರಭಸಕ್ಕೆ ತೀವ್ರವಾಗಿ ಗಾಯಗೊಂಡಿದ್ದ ಅವರನ್ನು ತಕ್ಷಣವೇ ಸಕಲೇಶಪುರದ ಕ್ರಾಫಾರ್ಡ್ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಪ್ರಥಮ ಚಿಕಿತ್ಸೆ ನೀಡಲಾಗಿತ್ತು.

ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಆಸ್ಪತ್ರೆಗೆ ರವಾನಿಸಲಾಯಿತಾದರೂ, ಅಲ್ಲಿ ಚಿಕಿತ್ಸೆಗೆ ಸ್ಪಂದಿಸದೆ ಯುವಕ ಕೊನೆಯುಸಿರೆಳೆದಿದ್ದಾರೆ.

ಘಟನೆಗೆ ಸಂಬಂಧಿಸಿದಂತೆ ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪರಾರಿಯಾಗಿರುವ ಅಪರಿಚಿತ ವಾಹನ ಹಾಗೂ ಚಾಲಕನ ಪತ್ತೆಗೆ ಪೊಲೀಸರು ಜಾಲ ಬೀಸಿದ್ದಾರೆ.

ಹಾಸನಾಂಬೆ ದರ್ಶನೋತ್ಸವದಲ್ಲಿ ಶಿಷ್ಟಾಚಾರ ಉಲ್ಲಂಘನೆ ಆರೋಪ: ಸಿದ್ದರಾಮಯ್ಯಗೆ ಸಂಜೆ 6.30ಕ್ಕೆ ವಿಶೇಷ ದರ್ಶನ!

ಪ್ರಜಾ ಭಾರತ ವರದಿ

ಹಾಸನ: ಐತಿಹಾಸಿಕ ಹಾಸನಾಂಬೆ ದೇವಿಯ ದರ್ಶನೋತ್ಸವದಲ್ಲಿ ಶಿಷ್ಟಾಚಾರ ಪಾಲನೆ ವಿಚಾರ ಮತ್ತೆ ಚರ್ಚೆಗೆ ಗ್ರಾಸವಾಗಿದ್ದು, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಂಜೆ 6.30ರ ವೇಳೆಗೆ ವಿಶೇಷ ದರ್ಶನಕ್ಕೆ ಅವಕಾಶ ಕಲ್ಪಿಸಿರುವುದು ವಿವಾದಕ್ಕೆ ಕಾರಣವಾಗಿದೆ.



ಹಾಸನಾಂಬೆ ದರ್ಶನೋತ್ಸವದಲ್ಲಿ ಗಣ್ಯರಿಗೆ ಶಿಷ್ಟಾಚಾರದಡಿ ಬೆಳಿಗ್ಗೆ 10.30ರಿಂದ ಮಧ್ಯಾಹ್ನ 12.30ರವರೆಗೆ ಮಾತ್ರ ದರ್ಶನಕ್ಕೆ ಅವಕಾಶ ನಿಗದಿಪಡಿಸಲಾಗಿತ್ತು. ಆದರೆ, ಶುಕ್ರವಾರ ಸಂಜೆ ಸುಮಾರು 6.30ಕ್ಕೆ ಸಿದ್ದರಾಮಯ್ಯ ಅವರು ವಿಶೇಷ ಬಗ್ಗೀಸ್ ವಾಹನದ ಮೂಲಕ ದೇವಾಲಯದ ಮುಖ್ಯ ದ್ವಾರದಿಂದ ಪ್ರವೇಶಿಸಿ ದೇವಿಯ ದರ್ಶನ ಪಡೆದರು.

ಈ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ, ಸಂಸದ ಶ್ರೇಯಸ್ ಎಂ. ಪಟೇಲ್ ಹಾಗೂ ಜಿಲ್ಲಾಡಳಿತದ ಅಧಿಕಾರಿಗಳು ಉಪಸ್ಥಿತರಿದ್ದರು.

ಸಿದ್ದರಾಮಯ್ಯ ಅವರು ರೂ1,000 ವಿಶೇಷ ಟಿಕೆಟ್ ಪಡೆದು ದರ್ಶನ ಪಡೆದಿದ್ದು, ನಿಗದಿತ ಶಿಷ್ಟಾಚಾರದ ಸಮಯ ಮುಗಿದ ಹಲವು ಗಂಟೆಗಳ ನಂತರ ವಿಶೇಷ ಪ್ರವೇಶ ಕಲ್ಪಿಸಿರುವುದು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆಯ ಮೇರೆಗೆ ಈ ವಿಶೇಷ ವ್ಯವಸ್ಥೆ ಮಾಡಲಾಗಿದೆ ಎಂಬ ಆರೋಪವೂ ಕೇಳಿಬಂದಿದೆ.

ಸಾಮಾನ್ಯ ಭಕ್ತರು ಗಂಟೆಗಟ್ಟಲೆ ಸರತಿ ಸಾಲಿನಲ್ಲಿ ನಿಂತು ದರ್ಶನ ಪಡೆಯುತ್ತಿದ್ದರೆ, ಗಣ್ಯರಿಗೆ ಮಾತ್ರ ಪ್ರತ್ಯೇಕ ಸಮಯದಲ್ಲಿ ಅವಕಾಶ ಕಲ್ಪಿಸಿರುವುದು ಯಾವ ಮಾನದಂಡದಡಿ ಎಂಬ ಚರ್ಚೆ ಸಾರ್ವಜನಿಕ ವಲಯದಲ್ಲಿ ಆರಂಭವಾಗಿದೆ.

ಶಿಸ್ತು ಮತ್ತು ಪಾರದರ್ಶಕತೆಗೆ ಆದ್ಯತೆ ನೀಡುವುದಾಗಿ ಹೇಳುವ ಜಿಲ್ಲಾಡಳಿತ, ಗಣ್ಯರ ವಿಚಾರದಲ್ಲಿ ತಾನೇ ರೂಪಿಸಿದ ನಿಯಮಗಳನ್ನು ಪಾಲಿಸಿದೆಯೇ ಎಂಬ ಪ್ರಶ್ನೆ ಎದುರಾಗಿದೆ.

ಸಾಮಾನ್ಯ ಭಕ್ತರಿಗೂ ಗಣ್ಯರಿಗೂ ಒಂದೇ ರೀತಿಯ ನಿಯಮ ಅನ್ವಯವಾಗಬೇಕೆಂಬ ಒತ್ತಾಯ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ.

ಹಾಸನಾಂಬೆ ದರ್ಶನಕ್ಕೆ ಬಂದ ಸಚಿವ ಪುಟ್ಟರಂಗಶೆಟ್ಟಿ ವಾಹನಕ್ಕೆ ಬ್ರೇಕ್

ಭದ್ರತಾ ಸಿಬ್ಬಂದಿಯಿಂದಲೇ ವಾಹನ ತಡೆ; ನಡೆದುಕೊಂಡೇ ತೆರಳಿ ದೇವಿಯ ದರ್ಶನ ಪಡೆದ ಸಚಿವ

ಪ್ರಜಾ ಭಾರತ ವರದಿ



ಹಾಸನ: ಹಾಸನಾಂಬೆ ದೇವಿಯ ದರ್ಶನಕ್ಕೆ ಆಗಮಿಸಿದ ಸಚಿವ ಪುಟ್ಟರಂಗಶೆಟ್ಟಿ ಅವರ ಸರ್ಕಾರಿ ವಾಹನವನ್ನು ದೇವಾಲಯದ ಮುಖ್ಯದ್ವಾರದ ಬಳಿ ಕರ್ತವ್ಯನಿರತ ಭದ್ರತಾ ಸಿಬ್ಬಂದಿ ತಡೆದ ಘಟನೆ ಶುಕ್ರವಾರ ನಡೆದಿದೆ.

ಸಚಿವರು ಪ್ರೋಟೋಕಾಲ್ ವ್ಯವಸ್ಥೆಯ ಮೂಲಕ ಆಗಮಿಸದೆ ನೇರವಾಗಿ ಸರ್ಕಾರಿ ವಾಹನದಲ್ಲಿ ದೇವಾಲಯದ ಮುಖ್ಯದ್ವಾರದ ಬಳಿ ಬಂದಿದ್ದರು ಎನ್ನಲಾಗಿದೆ. ಈ ವೇಳೆ ಭದ್ರತಾ ಸಿಬ್ಬಂದಿ ವಾಹನವನ್ನು ಒಳಗೆ ಬಿಡಲು ನಿರಾಕರಿಸಿದರು. ಸಚಿವರ ಆಪ್ತ ಸಹಾಯಕರು ವಾಹನದಲ್ಲಿರುವವರು ಸಚಿವರು ಎಂದು ತಿಳಿಸಿದರೂ ಸಿಬ್ಬಂದಿ ನಿಯಮ ಸಡಿಲಿಸದೆ ವಾಹನ ಪ್ರವೇಶಕ್ಕೆ ಅವಕಾಶ ನೀಡಲಿಲ್ಲ. ಇದರಿಂದ ಸಚಿವರು ವಾಹನದಿಂದ ಇಳಿದು ನಡೆದುಕೊಂಡೇ ದೇವಾಲಯಕ್ಕೆ ತೆರಳಿ ಹಾಸನಾಂಬೆ ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಇದೇ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, 'ಅವರು ಯಾರ ನಾಯಕರು? ಅವರೇನು ಸರ್ಕಾರ ನಡೆಸುತ್ತಿದ್ದಾರೆಯೇ?' ಎಂದು ಪ್ರಶ್ನಿಸುವ ಮೂಲಕ ಆಡಳಿತಾರೂಢ ನಾಯಕರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಜನರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ರಾಜಕೀಯ ಹೇಳಿಕೆಗಳಿಗೆ ಸೀಮಿತವಾಗಿರುವುದು ಸರಿಯಲ್ಲ ಎಂದು ಟೀಕಿಸಿದ ಅವರು, ರಾಜ್ಯದ ಜನರ ಹಿತಾಸಕ್ತಿ ಕಾಪಾಡುವುದು ಸರ್ಕಾರದ ಮೊದಲ ಆದ್ಯತೆಯಾಗಬೇಕು ಎಂದು ಆಗ್ರಹಿಸಿದರು.

ಹಾಸನಾಂಬೆ ಜಾತ್ರೆಯ ಹಿನ್ನೆಲೆಯಲ್ಲಿ ದೇವಾಲಯದ ಸುತ್ತಮುತ್ತ ಬಿಗಿ ಭದ್ರತೆ ಕೈಗೊಳ್ಳಲಾಗಿದ್ದು, ಗಣ್ಯರು ಸೇರಿದಂತೆ ಎಲ್ಲರ ವಾಹನ ಸಂಚಾರಕ್ಕೂ ನಿಗದಿತ ನಿಯಮಗಳನ್ನು ಪಾಲಿಸುವಂತೆ ಸಿಬ್ಬಂದಿ ಕ್ರಮ ಕೈಗೊಂಡಿರುವುದು ಗಮನ ಸೆಳೆಯಿತು.

ಪ್ರಜಾ ಭಾರತ
ಶುಭ ನುಡಿ

ಜೀವನ ಎಂದರೆ
ಅಭಿನಯಿಸುವುದಲ್ಲ,
ಅನುಭವಿಸುವುದು..!!

ಮೂರನೇ ಮುಖ್ಯಮಂತ್ರಿಯ ಪ್ರಶ್ನೆಯೇ ಇಲ್ಲ, ಡಿಕೆಶಿ ಸಿಎಂ ಆಗಿ ಮುಂದುವರೆಯುತ್ತಾರೆ:

ಬೆಂಗಳೂರು: ಮಾಜಿ ಮುಖ್ಯಮಂತ್ರಿ ಮತ್ತು ಕಾಂಗ್ರೆಸ್ ಕಾರ್ಯಕಾರಿ ಸಮಿತಿ(ಅಘಅ) ಸದಸ್ಯರಾದ ಸಿದ್ದರಾಮಯ್ಯ, ಈ ಹಿಂದೆ ಎರಡು ಬಾರಿ ಮುಖ್ಯಮಂತ್ರಿಯಾಗಿ ಸರ್ಕಾರವನ್ನು ಮುನ್ನಡೆಸಿದ್ದಾರೆ. ಈಗ ಅವರು 2028ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಕೆಲಸ ಮಾಡಬೇಕು ಎಂದು ಲೋಕೋಪಯೋಗಿ (PWD) ಸಚಿವ ಸತೀಶ್ ಜಾರಕಿಹೊಳಿ ಅವರು ಶುಕ್ರವಾರ ಹೇಳಿದ್ದಾರೆ.

50 ವರ್ಷಗಳ ಜನಸೇವೆ ನಮ್ಮ ಕುಟುಂಬದ ಹೆಗ್ಗುರುತು

‘ಹಳ್ಳಿಗುಗ್ಗು’ ಎಂದವರಿಗೆ ಹೆಚ್.ಡಿ. ರೇವಣ್ಣ ಖಡಕ್ ತಿರುಗೇಟು

ಪ್ರಜಾ ಭಾರತ ವರದಿ



ಹಾಸನ: ಕಳೆದ 50 ವರ್ಷಗಳಿಂದ ನಮ್ಮ ಕುಟುಂಬ ರಾಜ್ಯದ ಜನರ ಸೇವೆ ಮಾಡುತ್ತಾ ಬಂದಿದೆ. ಅಭಿವೃದ್ಧಿ ಕಾರ್ಯಗಳ ಮೂಲಕ ಜನರ ನಡುವೆ ಗುರುತಿಸಿಕೊಂಡಿದೆ ಎಂದು ಮಾಜಿ ಸಚಿವ, ಜೆಡಿಎಸ್ ನಾಯಕ ಹೆಚ್.ಡಿ. ರೇವಣ್ಣ ಹೇಳಿದರು.

ನಗರದ ಅಧಿದೇವತೆ ಶ್ರೀ ಹಾಸನಾಂಬೆ ದೇವಾಲಯಕ್ಕೆ ಶುಕ್ರವಾರ ಪತ್ನಿ ಭವಾನಿ ರೇವಣ್ಣ ಅವರೊಂದಿಗೆ ಆಗಮಿಸಿದ ಅವರು ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ರಾಜ್ಯದಲ್ಲಿ ಉತ್ತಮ ಮಳೆ-ಬೆಳೆಯಾಗಿ ರೈತರು ಹಾಗೂ ಜನರು ಸುಖ- ಸಮೃದ್ಧಿಯಿಂದ ಬದುಕಲಿ ಎಂದು ಪ್ರಾರ್ಥಿಸಿದರು.

ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರನ್ನು ‘ಹಳ್ಳಿಗುಗ್ಗು’ ಎಂದು ಟೀಕಿಸಿದ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ತಿರುಗೇಟು ನೀಡಿದರು. “ಈ ಹಳ್ಳಿಗುಗ್ಗು ಕುಟುಂಬವೇ 50 ವರ್ಷಗಳಿಂದ ಜನಸೇವೆ ಮಾಡುತ್ತಿದೆ. ರಾಜ್ಯದ ಅಭಿವೃದ್ಧಿಗೆ ಕೊಡುಗೆ ನೀಡಿದೆ. ಅಭಿವೃದ್ಧಿ ಕೆಲಸ ಮಾಡಬೇಕಾದರೆ ಇಂತಹವರೇ ಬರಬೇಕು” ಎಂದರು. ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಆದ್ಯತೆ ನೀಡಿ ಪಿಯು, ಪದವಿ, ವೈದ್ಯಕೀಯ ಕಾಲೇಜುಗಳು ಹಾಗೂ ಪಾಲಿಟೆಕ್ನಿಕ್‌ಗಳನ್ನು ಆರಂಭಿಸಲಾಗಿದೆ.

ಸುಮಾರು 1,600 ಪ್ರೌಢಶಾಲೆಗಳಿಗೆ ಮಂಜೂರಾತಿ ನೀಡುವ ಮೂಲಕ ಗ್ರಾಮೀಣ ವಿದ್ಯಾರ್ಥಿಗಳಿಗೆ ಶಿಕ್ಷಣದ ಅವಕಾಶ ಕಲ್ಪಿಸಲಾಗಿದೆ ಎಂದು ತಮ್ಮ ಕುಟುಂಬದ ಅಭಿವೃದ್ಧಿ ಕಾರ್ಯಗಳನ್ನು ವಿವರಿಸಿದರು.

ಇದೇ ವೇಳೆ ಕುಟುಂಬದ ವಿರುದ್ಧ ನಡೆದ ಬೆಳವಣಿಗೆಗಳ ಕುರಿತು ಬೇಸರ ವ್ಯಕ್ತಪಡಿಸಿದ ಅವರು, “ನಮ್ಮ ಕುಟುಂಬಕ್ಕೆ ಹಾಗೂ ತಂದೆ-ತಾಯಿಗೆ ಕಣ್ಣೀರು ಹಾಕಿಸಿದವರ ವಿಚಾರವನ್ನು ಹಾಸನಾಂಬೆ ತಾಯಿಗೆ ಬಿಟ್ಟಿದ್ದೇನೆ. ತಾಯಿಯೇ ಎಲ್ಲವನ್ನೂ ನೋಡಿಕೊಳ್ಳುತ್ತಾಳೆ” ಎಂದು ಹೇಳಿದರು.

ಭವಾನಿ ರೇವಣ್ಣ ಮಾತನಾಡಿ, ಸುಮಾರು 35 ವರ್ಷಗಳ ಹಿಂದೆ ಹಾಸನಾಂಬೆ ದರ್ಶನಕ್ಕೆ ಬಂದಾಗಿನ ಪರಿಸ್ಥಿತಿಗೂ ಈಗಿನ ಭಕ್ತರ ಸಂಖ್ಯೆಗೂ ಸಾಕಷ್ಟು ವ್ಯತ್ಯಾಸವಿದೆ. ಇಂದು ರಾಜ್ಯದ ವಿವಿಧ ಭಾಗಗಳು ಹಾಗೂ ಹೊರ ರಾಜ್ಯಗಳಿಂದಲೂ ಸಾವಿರಾರು ಭಕ್ತರು ಆಗಮಿಸುತ್ತಿರುವುದು ಸಂತಸದ ಸಂಗತಿ ಎಂದರು. ದೇವಿಯ ದರ್ಶನ ಪಡೆಯಲು ಸಾಧ್ಯವಾಗದ ಭಕ್ತರಿಗೂ ಒಳಿತಾಗಲಿ ಎಂದು ಪ್ರಾರ್ಥಿಸಿರುವುದಾಗಿ ತಿಳಿಸಿದರು.

ದರ ಏರಿಕೆಯ ಬರೆ ಜನಸಾಮಾನ್ಯರ ಹೆಗಲಿಗೆ : ಜಯ ಕರ್ನಾಟಕ ಆಕ್ರೋಶ

ದರ ಏರಿಕೆ ಹಿಂಪಡೆಯದಿದ್ದರೆ ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಉಗ್ರ ಹೋರಾಟದ ಎಚ್ಚರಿಕೆ

ಪ್ರಜಾ ಭಾರತ ವರದಿ

ಬೇಲೂರು: ಹಾಲು, ಮೊಸರು ಹಾಗೂ ಕೆಎಸ್‌ಆರ್‌ಟಿಸಿ ಬಸ್ ಪ್ರಯಾಣ ದರ ಏರಿಕೆಯನ್ನು ಖಂಡಿಸಿ ಜಯ ಕರ್ನಾಟಕ ಸಂಘಟನೆಯ ವತಿಯಿಂದ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಸಂಘಟನೆಯ ತಾಲ್ಲೂಕು ಅಧ್ಯಕ್ಷ ರಾಜಣ್ಣ, ಹಾಲು ಪ್ರತಿಯೊಂದು ಕುಟುಂಬದ ನಿತ್ಯದ ಅಗತ್ಯ ವಸ್ತುವಾಗಿದ್ದು, ಪ್ರತಿ ಲೀಟರ್‌ಗೆ ರೂ.14 ಹೆಚ್ಚಳ ಮಾಡಿರುವುದಲ್ಲದೆ ಮೊಸ-ರಿನ ಬೆಲೆಯನ್ನೂ ಏರಿಸಲಾಗಿದೆ. ಇದರ ಬೆನ್ನಲ್ಲೇ ಬಸ್ ಪ್ರಯಾಣ ದರ ಹೆಚ್ಚಿಸಿರುವುದು ಜನ ಸಾಮಾನ್ಯರ ಗಾಯದ ಮೇಲೆ ಬರೆ ಎಳೆದಂತಾಗಿದೆ.



ವಿದ್ಯಾರ್ಥಿಗಳು, ಉದ್ಯೋಗಿಗಳು, ಕೂಲಿ ಕಾರ್ಮಿಕರು ಹಾಗೂ ನಿತ್ಯ ಪ್ರಯಾಣಿಕರು ಬೆಲೆ ಏರಿಕೆಯಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರ ಕೂಡಲೇ ದರ ಏರಿಕೆ ನಿರ್ಧಾರವನ್ನು ಹಿಂಪಡೆಯಬೇಕು. ಇಲ್ಲದಿದ್ದರೆ ತಾಲ್ಲೂಕಿನಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಜಿಲ್ಲಾಧ್ಯಕ್ಷ ಸೋಮೇಶ್ ಮಾತನಾಡಿ, ಗ್ಯಾರಂಟಿ ಯೋಜನೆಗಳು ನಿಜವಾದ ಫಲಾನುಭವಿ ಗಳಾದ ಬಡವರು, ಮಧ್ಯಮ ವರ್ಗದವರು ಹಾಗೂ ವೃದ್ಧರಿಗೆ ತಲುಪಬೇಕು. ಆ ದರೆ ಯೋಜನೆಗಳ ವೆಚ್ಚವನ್ನು ಸರಿದೂಗಿಸಲು ಜನಸಾಮಾನ್ಯರ ಮೇಲೆ ಬೆಲೆ ಏರಿಕೆಯ ಹೊರೆ ಹೇರುವುದು ಸರಿಯಲ್ಲ.

ಸರ್ಕಾರ ಜನರ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದರು.

ಸಂಘಟನೆಯ ಕಾರ್ಯಾಧ್ಯಕ್ಷ ಬಿ.ಎಲ್. ಲಕ್ಷ್ಮಣ್ ಮಾತನಾಡಿ, ಗ್ಯಾರಂಟಿ ಯೋಜನೆಗಳ ಮೂಲಕ ಒಂದು ಕಡೆ ಜನ-ರಿಗೆ ಹಣ ನೀಡುತ್ತಿರುವ ಸರ್ಕಾರ, ಮತ್ತೊಂದೆಡೆ ಹಾಲು, ಮೊಸರು, ಪೆಟ್ರೋಲ್, ಡೀಸೆಲ್ ಹಾಗೂ ಬಸ್ ಪ್ರಯಾಣ ದರ ಹೆಚ್ಚಿಸುವ ಮೂಲಕ ಜನರ ಜೇಬಿಗೆ ಕತ್ತರಿ ಹಾಕುತ್ತಿದೆ. ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ಬಡ ಮತ್ತು ಮಧ್ಯಮ ವರ್ಗದವ-ರಿಗೆ ಮತ್ತಷ್ಟು ಹೊರೆ ಉಂಟಾಗಿದೆ. ಕೂಡಲೇ ಏರಿಕೆ ಹಿಂಪಡೆಯದಿದ್ದರೆ ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಉಪಾಧ್ಯಕ್ಷ ಶ್ರೇಯಸ್, ಪ್ರಧಾನ ಕಾರ್ಯದರ್ಶಿ ಮಂಜುನಾಥ್, ಯುವ ಘಟಕದ ಅಧ್ಯಕ್ಷ ಹೇಮಂತ್ ಕುಮಾರ್, ಆಟೋ ಘಟಕದ ಅಧ್ಯಕ್ಷ ಲಕ್ಷ್ಮಣ್, ಸಮಾಜ ಸೇವಕ ವೆಂಕಟೇಶ್, ನೆಟ್ಟಕೆರೆ ಸತೀಶ್, ಉಪಾಧ್ಯಕ್ಷ ಜಯರಾಮ್, ಎಸ್.ಎಂ. ರಾಜು ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಸರ್ಕಾರ ವಿಫಲ: ಚಲವಾದಿ ನಾರಾಯಣಸ್ವಾಮಿ

ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಸೋಲು ಖಚಿತ

ಪ್ರಜಾ ಭಾರತ ವರದಿ



ಹಾಸನ: ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಅನುಷ್ಠಾನದಲ್ಲಿ ವಿಫಲವಾಗಿದ್ದು, ಜನರಿಗೆ ನೀಡಿದ ಭರವಸೆಗಳನ್ನು ಈಡೇರಿಸುವಲ್ಲಿ ಸರ್ಕಾರ ವಂಚಿಸಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ಆರೋಪಿಸಿದರು.

ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯುವನಿಧಿ ಯೋಜನೆ ನಿರೀಕ್ಷಿತ ಫಲ ನೀಡಿಲ್ಲ. ಹಾಲಿನ ಪ್ರೋತ್ಸಾಹ ಧನ ಹಾಗೂ ರೈತರ ಸಬ್ಸಿಡಿ ವಿಚಾರದಲ್ಲೂ ಸರ್ಕಾರ ಅನ್ಯಾಯ ಮಾಡುತ್ತಿದೆ. ರೈತರ ಹಿತ ಕಾಯುವ ಭರವಸೆ ನೀಡಿದ್ದ ಕಾಂಗ್ರೆಸ್ ಇದೀಗ ರೈತರನ್ನು ಸಂಕಷ್ಟಕ್ಕೆ ದೂಡಿದೆ ಎಂದು ಟೀಕಿಸಿದರು.

ಗ್ಯಾರಂಟಿ ಯೋಜನೆಗಳ ಬಗ್ಗೆ ಜನರು ಎಲ್ಲವನ್ನೂ ಗಮನಿಸುತ್ತಿದ್ದು, ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸಲಿದ್ದಾರೆ. ಇವಿಎಂ ಇರಲಿ, ಬ್ಯಾಲೆಟ್ ಪೇಪರ್ ಇರಲಿ, ಕಾಂಗ್ರೆಸ್ ಸೋಲು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಚಿವ ಪ್ರಿಯಾಂಕ್ ಖರ್ಗೆ ಅವರ ಹೇಳಿಕೆಗಳಿಗೂ ತಿರುಗೇಟು ನೀಡಿದ ಅವರು, ಭಾರತ ಹಳ್ಳಿಗಳ ದೇಶವಾಗಿದ್ದು, ಗ್ರಾಮೀಣ ಜನರ ಶ್ರಮದಿಂದಲೇ ದೇಶದ ಆರ್ಥಿಕ ವ್ಯವಸ್ಥೆ ಮುನ್ನಡೆಯುತ್ತಿದೆ. ಸಾಮಾನ್ಯ ಜನರನ್ನು ಕೀಳಾಗಿ ಕಾಣುವ ಮನೋಭಾವ ಸರಿಯಲ್ಲ. ಸಾರ್ವಜನಿಕ ಜೀವನದಲ್ಲಿರುವವರು ಜವಾಬ್ದಾರಿಯಿಂದ ಮಾತನಾಡಬೇಕು. ಅಹಂಕಾರದ ವರ್ತನೆಗೆ ಜನರೇ ತಕ್ಕ ಉತ್ತರ ನೀಡಲಿದ್ದಾರೆ ಎಂದು ಎಚ್ಚರಿಸಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಗೌರವಕ್ಕೆ ಧಕ್ಕೆ ತರುತ್ತಿರುವುದು ಅವರ ಪುತ್ರ ಪ್ರಿಯಾಂಕ್ ಖರ್ಗೆ ಅವರ ಹೇಳಿಕೆಗಳೇ ಎಂದು ಟೀಕಿಸಿದರು.

ಆರ್.ಆರ್. ಕೃಷ್ಣಮೂರ್ತಿ ಆಂದಲೆ ಅವರಿಗೆ ‘ಕರ್ನಾಟಕ ಕಲಾರತ್ನ’ ಪ್ರಶಸ್ತಿ ಪ್ರದಾನ

ಪ್ರಜಾ ಭಾರತ ವರದಿ



ಬೆಂಗಳೂರು: ಕನ್ನಡ ರಾಜ್ಯೋತ್ಸವದ ಅಂಗವಾಗಿ ಬೆಂಗಳೂ-ರಿನ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀಕೃಷ್ಣರಾಜ ಪರಿಷನ್ಮಂದಿರದಲ್ಲಿ ನ.4ರಂದು ನಡೆದ ಸಮಾರಂಭದಲ್ಲಿ ಹಾಸನ ಜಿಲ್ಲೆ, ಬೇಲೂರು ತಾಲ್ಲೂಕಿನ ಮಾದಿಹಳ್ಳಿ ಹೋಬಳಿಯ ಆಂದಲೆ ಗ್ರಾಮದ ಸಮಾಜಸೇವಕ, ಕನ್ನಡ ಸಾಹಿತ್ಯ ಪರಿಷತ್ ಸದಸ್ಯ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ, ನಾಟಕ ನಿರ್ದೇಶಕ ಹಾಗೂ ಹೊಯ್ಸಳ ರತ್ನ ಪ್ರಶಸ್ತಿ ಪುರಸ್ಕೃತ ಆರ್.ಆರ್. ಕೃಷ್ಣಮೂರ್ತಿ ಆಂದಲೆ ಅವರಿಗೆ ‘ಕರ್ನಾಟಕ ಕಲಾರತ್ನ’ ಬಿರುದು ನೀಡಿ ಗೌರವಿಸಲಾಯಿತು.

ಶ್ರೀರಂಗಪಟ್ಟಣದ ಶ್ರೀವಾರಿ ಸೇವಾ ಚಾರಿಟಬಲ್ ಟ್ರಸ್ಟ್ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಟ್ರಸ್ಟ್ ಅಧ್ಯಕ್ಷ ಬಿ.ಕೆ. ಅಭಿಷೇಕ್ ಕಲ್ಯಾಣ್ ಗುರೂಜಿ, ಉಪಾಧ್ಯಕ್ಷ ಗೌತಮ್, ವಿನೂತನ ಸಾಂಸ್ಕೃತಿಕ, ಸಾಮಾಜಿಕ ಮತ್ತು ಕ್ರೀಡಾ ಟ್ರಸ್ಟ್ ಅಧ್ಯಕ್ಷೆ ವಿನುತಾ, ನಾಗರಿಕ ಮಾನವ ಹಕ್ಕು ಆಯೋಗದ ಅಧ್ಯಕ್ಷ ರವಿರೆಡ್ಡಿ ಸೇರಿದಂತೆ ಹಲವು ಗಣ್ಯರು ಹಾಗೂ ಧಾರ್ಮಿಕ ಗುರುಗಳು ಉಪಸ್ಥಿತ-ರಿದ್ದರು.

ಇದೇ ಸಂದರ್ಭದಲ್ಲಿ ಕೃಷ್ಣಮೂರ್ತಿ ಅವರ ಪುತ್ರರಾದ ಪುರೋಹಿತರು, ತಬಲಾ ವಾದಕರು ಹಾಗೂ ಧಾರ್ಮಿಕ ಸೇವಾ ರತ್ನ ಪ್ರಶಸ್ತಿ ಪುರಸ್ಕೃತ ಆರ್.ಕೆ. ಕುಮಾರಸ್ವಾಮಿ ಅವರಿಗೆ ‘ಕರ್ನಾಟಕ ಕಲಾ ಸೇವಾ ರತ್ನ’ ಹಾಗೂ ಅರ್ಚಕರು, ಛಾಯಾಗ್ರಾಹಕರು ಮತ್ತು ಗಾಯಕರಾದ ಆರ್. ಕೆ. ಚಂದನ್ ಅವರಿಗೆ ‘ಕರ್ನಾಟಕ ಕಲಾ ಸೇವಾ ರತ್ನ’ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಭಾಗಗಳ ಗಣ್ಯರು, ಧಾರ್ಮಿಕ ಪಂಡಿತರು, ಗುರುಗಳು, ಚಲನಚಿತ್ರ ನಟರು, ನಿರ್ದೇಶಕರು ಹಾಗೂ ಗಾಯಕರು ಭಾಗವಹಿಸಿದ್ದರು.

ಸಾವಿರಾರು ಜನರು ಕಾರ್ಯಕ್ರಮಕ್ಕೆ ಸಾಕ್ಷಿಯಾದರು. ಶ್ರೀಮತಿ ಆಧ್ಯಾ ಅವರು ನಿರೂಪಣೆ, ಸ್ವಾಗತ ಹಾಗೂ ವಂದನಾರ್ಪಣೆ ನೆರವೇರಿಸಿದರು.

ಅತಿವೇಗದ ಚಾಲನೆಗೆ ಡಿವೈಡರ್‌ಗೆ ಡಿಕ್ಕಿ



ಪ್ರಜಾ ಭಾರತ ವರದಿ

ಅರಸೀಕೆರೆ: ಚಿಕ್ಕಮಗಳೂ-ರಿನಿಂದ ಬೆಂಗಳೂರಿಗೆ ಟೊಮೇಟೊ ಸಾಗಿಸುತ್ತಿದ್ದ ಅಶೋಕ್ ಲೇಲ್ಯಾಂಡ್ ಗೂಡ್ಸ್ ವಾಹನವು ಚಾಲಕನ ಅತಿವೇಗ ಹಾಗೂ ನಿರ್ಲಕ್ಷ್ಯದ ಚಾಲನೆಯಿಂದ ನಿಯಂತ್ರಣ ತಪ್ಪಿ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದು ಪಲ್ಟಿಯಾದ ಘಟನೆ ಶಿವಮೊಗ್ಗ-ಬೆಂಗಳೂರು ಹೆದ್ದಾರಿಯ ಯಾದಾಪುರ ಬೈಪಾಸ್ ಸಮೀಪ ನಡೆದಿದೆ. ನ. 6ರ ನಸುಕಿನ ಜಾವ 2ರಿಂದ 3 ಗಂಟೆಯ ನಡುವೆ ಘಟನೆ ಸಂಭವಿಸಿದ್ದು, ವಾಹನದಲ್ಲಿದ್ದ ಟೊಮೇಟೊ ರಸ್ತೆಯುದ್ದಕ್ಕೂ ಚೆಲ್ಲಾಪಿಲ್ಲಿಯಾಗಿ ಬಿದ್ದಿವೆ. ಅದೃಷ್ಟವಶಾತ್ ದೊಡ್ಡ ಅನಾಹುತ ತಪ್ಪಿದ್ದು, ಚಾಲಕನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಅಪಘಾತಕ್ಕೀಡಾದ ವಾಹನದ ನೋಂದಣಿ ಸಂಖ್ಯೆ KA-18-D-2714 ಎಂದು ತಿಳಿದುಬಂದಿದೆ.

ಕಬ್ಬಳ್ಳಿ ಬಸವೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಪ್ರಚಾರ ರಥಕ್ಕೆ ಭಕ್ತಿಪೂರ್ವಕ ಸ್ವಾಗತ

ಪ್ರಜಾ ಭಾರತ ವರದಿ



ಅರಸೀಕೆರೆ: ಶ್ರೀ ಕ್ಷೇತ್ರ ಕಬ್ಬಳ್ಳಿಯ ಶ್ರೀ ಬಸವೇಶ್ವರ ಸ್ವಾಮಿ ದೇವಸ್ಥಾನದ ಲೋಕಾರ್ಪಣೆ, ಮಹಾ ಕುಂಭಾಭಿಷೇಕ ಹಾಗೂ ಜಾತ್ರಾ ಮಹೋತ್ಸವದ ಅಂಗವಾಗಿ ಧಾರ್ಮಿಕ ಜಾಗೃತಿ ಮೂಡಿಸಲು ಹೊರಟಿರುವ ಪ್ರಚಾರ ರಥ ಕ್ಕೆ ಅರಸೀಕೆರೆಯಲ್ಲಿ ಭಕ್ತಿಪೂರ್ವಕ ಸ್ವಾಗತ ನೀಡಲಾಯಿತು.

ಈ ತಿಂಗಳ 14ರಿಂದ 16ರವರೆಗೆ ನಡೆಯಲಿರುವ ಧಾರ್ಮಿಕ ಕಾರ್ಯಕ್ರಮಗಳ ಪ್ರಚಾರಾ ರ್ಥ ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ನಗರದ ಪ್ರವಾಸಿ ಮಂದಿರದ ಆವರಣಕ್ಕೆ ಆಗಮಿಸಿದ ರಥ ಕ್ಕೆ ಅನಂತ ವಿದ್ಯಾಸಂಸ್ಥೆಯ ಅಧ್ಯಕ್ಷ ಅನಂತ್ ಕುಮಾರ್ ಸೇರಿದಂತೆ ವಿವಿಧ ಮುಖಂಡರು ಪೂಜೆ ಸಲ್ಲಿಸಿ ಬರಮಾಡಿಕೊಂಡರು.

ಪುಟಾಣಿ ಮಕ್ಕಳು ಸಾಂಪ್ರದಾಯಿಕವಾಗಿ ಕಳಸ ಹೊತ್ತು ರಥವನ್ನು ಸ್ವಾಗತಿಸಿದರೆ, ಶಾಲಾ ಮಕ್ಕಳು ಮೆರವಣಿಗೆಯಲ್ಲಿ ಪಾಲ್ಗೊಂಡು ಧಾರ್ಮಿಕ ಸಂಭ್ರಮಕ್ಕೆ ಮೆರುಗು ನೀಡಿದರು. ಬಳಿಕ ಪ್ರವಾಸಿ ಮಂದಿರದಿಂದ ಹೊರಟ ಪ್ರಚಾರ ರಥವು ನಗರದ ಬಿ.ಎಚ್. ರಸ್ತೆ ಮೂಲಕ ಪಿ.ಪಿ. ವೃತ್ತ ತಲುಪಿ, ಅಲ್ಲಿಂದ ಮುಂದಿನ ಗ್ರಾಮಗಳತ್ತ ಪ್ರಯಾಣ ಬೆಳೆಸಿತು.

ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಟಿ. ಆನಂದ್, ರಕ್ಷಣಾ ವೇದಿಕೆಯ ಹೇಮಂತ್ ಕುಮಾರ್, ಆದಿಚುಂಚನಗಿರಿ ಶಿಕ್ಷಣ ಸಂಸ್ಥೆಯ ನಿರ್ದೇಶಕ ಚಂದ್ರಪ್ಪ, ಪ್ರಾಂಶುಪಾಲರಾದ ಲಿಂಗೇಶ್, ಜ್ಞಾನೇಶ್ವರಿ, ಶಿಕ್ಷಕ ನಾಗೇಶ್, ಒಕ್ಕಲಿಗ ಸಂಘದ ಮುಖಂಡರಾದ ಗಂಗಣ್ಣ, ಧರ್ಮಣ್ಣ ಸೇರಿದಂತೆ ಹಲವು ಮುಖಂಡರು, ಭಕ್ತರು ಹಾಗೂ ಸಾರ್ವಜನಿಕರು ಉಪಸ್ಥಿತ-ರಿದ್ದರು.

ಆಲೂರು ಪ್ರತ್ಯೇಕ ವಿಧಾನಸಭಾ ಕ್ಷೇತ್ರವಾದಾಗ ಮಾತ್ರ ಅಭಿವೃದ್ಧಿ ಸಾಧ್ಯ: ಡಿ. ಸುಜಲಾದೇವಿ

ಪ್ರಜಾ ಭಾರತ ವರದಿ



ಆಲೂರು: ಪಟ್ಟಣದ ಶ್ರೀ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ಆಶ್ರಯದಲ್ಲಿ ನಡೆದ ನಾಲ್ಕನೇ ಆಲೂರು ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸಿ ಡಿ. ಸುಜಲಾದೇವಿ ಮಾತನಾಡಿದರು.

ಆಲೂರು ತಾಲ್ಲೂಕು ಪ್ರತ್ಯೇಕ ವಿಧಾನಸಭಾ ಕ್ಷೇತ್ರವಾಗಬೇಕು. ಇದಕ್ಕಾಗಿ ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಒಗ್ಗಟ್ಟಿನಿಂದ ಪ್ರಯತ್ನಿಸಬೇಕು. ಕನ್ನಡ ಭಾಷೆಯ ಬಳಕೆ, ಪುಸ್ತಕ ಓದುವ ಹವ್ಯಾಸ ಮತ್ತು ಗ್ರಾಮೀಣ ಗ್ರಂಥಾಲಯಗಳ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದರು.

ಸಮ್ಮೇಳನ ಉದ್ಘಾಟಿಸಿದ ಸಾಹಿತಿ ರವಿ ನಾಕಲಗೂಡು ಮಾತನಾಡಿ, ಸಾಹಿತ್ಯವು ಸಮಾಜದ ನೋವು, ನಲಿವು ಹಾಗೂ ಸಂಘರ್ಷಗಳನ್ನು ಪ್ರತಿಬಿಂಬಿಸುತ್ತದೆ. ಇಂತಹ ಸಮ್ಮೇಳನಗಳು ಯುವ ಬರಹಗಾರರಿಗೆ ಪ್ರೇರಣೆಯಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಾ ಭೂಷಣ, ಶಿಕ್ಷಣ ಸೇವಾ ಭೂಷಣ ಹಾಗೂ ಸಂಘಟನಾ ಸೇವಾ ಭೂಷಣ ಪ್ರಶಸ್ತಿಗಳನ್ನು ವಿವಿಧ ಕ್ಷೇತ್ರಗಳ ಸಾಧಕರಿಗೆ ಪ್ರದಾನ ಮಾಡಲಾಯಿತು.

ಶಾಸಕ ಸಿಮೆಂಟ್ ಮಂಜು, ಕ್ಷೇತ್ರ ಶಿಕ್ಷಣಾಧಿಕಾರಿ ಎ.ಜಿ. ಕೃಷ್ಣೇಗೌಡ, ಸಾಹಿತಿ ಹೆತ್ತೂರು ನಾಗರಾಜ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಹಾಲು, ಮೊಸರು, ಬಸ್ ಪ್ರಯಾಣ ದರ ಏರಿಕೆ ಖಂಡಿಸಿ ಕರವೇ ಪ್ರತಿಭಟನೆ

ಬಸ್ಸಿಗೆ ಹಗ್ಗ ಕಟ್ಟಿ ಎಳೆಯುವ ಮೂಲಕ ವಿನೂತನ ಆಕ್ರೋಶ

ಪ್ರಜಾ ಭಾರತ ವರದಿ



ಸಕಲೇಶಪುರ: ರಾಜ್ಯ ಸರ್ಕಾರ ಹಾಲು, ಮೊಸರು ಹಾಗೂ ಕೆ-ಎಸ್‌ಆರ್‌ಟಿಸಿ ಬಸ್ ಪ್ರಯಾಣ ದರ ಏರಿಕೆ ಮಾಡಿರುವುದನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ವತಿಯಿಂದ ಪಟ್ಟಣದ ಹಳೆ ಬಸ್ ನಿಲ್ದಾಣದ ಮುಂಭಾಗ ವಿನೂತನ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಕರವೇ ಕಾರ್ಯಕರ್ತರು ಬಸ್ಸಿಗೆ ಹಗ್ಗ ಕಟ್ಟಿ ಎಳೆಯುವ ಮೂಲಕ ಸರ್ಕಾರದ ದರ ಏರಿಕೆ ನೀತಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಈಗಾಗಲೇ ಸಂಕಷ್ಟದಲ್ಲಿರುವ ಜನಸಾಮಾನ್ಯರ ಮೇಲೆ ಮತ್ತಷ್ಟು ಹೊರೆ ಹಾಕುತ್ತಿರುವುದು ಖಂಡನೀಯ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಹಾಲು, ಮೊಸರು ಹಾಗೂ ಬಸ್ ಪ್ರಯಾಣ ದರವನ್ನು ತಕ್ಷಣವೇ ಹಿಂಪಡೆಯಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚ-ರಿಸಿದರು.

ನಂತರ ಉಪವಿಭಾಗಾಧಿಕಾ-ರಿಗಳಿಗೆ ಮನವಿ ಸಲ್ಲಿಸಿ, ದರ ಏರಿಕೆ ಹಿಂಪಡೆಯುವಂತೆ ಸರ್ಕಾರವನ್ನು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕರವೇ ತಾಲೂಕು ಅಧ್ಯಕ್ಷ ರಮೇಶ್ ಪೂಜಾರಿ, ಲಕ್ಷ್ಮಣ, ಪ್ರಸಾದ್, ಚಿದಾನಂದ, ಯತೀಶ್, ಸತೀಶ್, ವೆಂಕಟೇಶ್, ಬಾಗೆ ಘಟಕದ ಅಧ್ಯಕ್ಷ ಗೋಪಿ, ಧರ್ಮರಾಜ್, ಲಿಯಾ, ಅರುಣ್ ಯಸಲೂರು, ಆಚಂಗಿ ಘಟಕದ ಅಧ್ಯಕ್ಷ ವಜೀರ್, ಅಬ್ಬಾಸ್ ಉಮರ್, ಕ್ಯಾಮನಹಳ್ಳಿ ಘಟಕದ ಅಧ್ಯಕ್ಷ ಗೋಪಿ ಸೇರಿದಂತೆ ಅರೇಹಳ್ಳಿ ಭಾಗದ ಕಾರ್ಯಕರ್ತರು ಹಾಗೂ ಸಂಘಟನೆಯ ಪದಾಧಿಕಾ-ರಿಗಳು ಪಾಲ್ಗೊಂಡಿದ್ದರು.

Printed, Published & Owned By Dinesh B G and Printed at Honalu Graphic, Word No. 2, Ashok Road Behind Stadium, Satyamangala Village, Vidya Nagara Hassan District, Karnataka - 573201 and Published at Ward No.1 Behind Budda School, Halebeedu Road Shanthi Nagara Bantenahalli Belur Taluk Hassan Dist, Karnataka - 573115 - Editor Dinesh B G